# ಶಾಲೆ ದತ್ತು: ಸಂಸದರು, ಪರಿಷತ್ ಸದಸ್ಯರಿಗೆ ಮುಖ್ಯಮಂತ್ರಿ ಪತ್ರ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

**ತಲಾ 3 ಸರ್ಕಾರಿ ಶಾಲೆ ದತ್ತು ಪಡೆಯಲು ಕೋರಿಕೆ**

ರಾಜ್ಯದ ಲೋಕಸಭಾ ಸದಸ್ಯರು, ರಾಜ್ಯಸಭಾ ಸದಸ್ಯರು ಹಾಗೂ ವಿಧಾನ ಪರಿಷತ್ ಸದಸ್ಯರು ತಲಾ ಮೂರು ಸರ್ಕಾರಿ ಶಾಲೆಗಳನ್ನು ದತ್ತು ಪಡೆಯುವಂತೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಎಲ್ಲ ಸದಸ್ಯರಿಗೆ ಪತ್ರ ಬರೆದಿದ್ದಾರೆ.

2020-21ನೇ ಸಾಲಿನ ಬಜೆಟ್‌ನಲ್ಲಿ ಘೋಷಿಸಿರುವಂತೆ ರಾಜ್ಯದ ಎಲ್ಲಾ ವಿಧಾನ ಸಭಾ ಸದಸ್ಯರು ತಮ್ಮ ಕ್ಷೇತ್ರ ವ್ಯಾಪ್ತಿಯಲ್ಲಿರುವ ಮೂರು ಸರ್ಕಾರಿ ಶಾಲೆಗಳನ್ನು ದತ್ತು ಪಡೆದು ಅಭಿವೃದ್ಧಿಪಡಿಸಲು ಅವಕಾಶ ಕಲ್ಪಿಸಲಾಗಿದೆ. ಅದರಂತೆ ಸದಸ್ಯರು ಈಗಾಗಲೇ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸುತ್ತಿದ್ದಾರೆ. ಇದೇ ರೀತಿಯಲ್ಲಿ ವಿಧಾನ ಪರಿಷತ್ ಸದಸ್ಯರು, ಲೋಕಸಭಾ ಮತ್ತು ರಾಜ್ಯಸಭಾ ಸದಸ್ಯರು ತಲಾ ಮೂರು ಸರ್ಕಾರಿ ಶಾಲೆಗಳನ್ನು ದತ್ತು ಪಡೆದು ಶಾಸಕರು/ಸಂಸದರ ಪ್ರದೇಶಾಭಿವೃದ್ಧಿ ಯೋಜನೆಯಡಿ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳುವಿರೆಂದು ನಿರೀಕ್ಷಿಸುತ್ತೇನೆಂದು ಪತ್ರದಲ್ಲಿ ತಿಳಿಸಿದ್ದಾರೆ.

ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸುವ ಉದ್ದೇಶದಿಂದ ವಿಧಾನಸಭಾ, ವಿಧಾನ ಪರಿಷತ್, ಲೋಕಸಭಾ ಮತ್ತು ರಾಜ್ಯಸಭಾ ಸದಸ್ಯರು ತಮ್ಮ ಕ್ಷೇತ್ರ ವ್ಯಾಪ್ತಿಯ ಕನಿಷ್ಠ ಮೂರು ಸರ್ಕಾರಿ ಶಾಲೆಗಳನ್ನು ದತ್ತು ಪಡೆದು ಅಭಿವೃದ್ಧಿಪಡಿಸುವಂತೆ ಸರ್ಕಾರದ ಶಿಕ್ಷಣ ಸುಧಾರಣೆಗಳ ಸಲಹೆಗಾರರಾದ ಡಾ. ಎಂ.ಆರ್.ದೊರೆಸ್ವಾಮಿಯವರು ಸರ್ಕಾರಕ್ಕೆ ಶಿಫಾರಸು ಮಾಡಿದ್ದರು. ಅದರಂತೆ 221 ಶಾಸಕರು 663 ಸರ್ಕಾರಿ ಶಾಲೆಯನ್ನು ದತ್ತು ಪಡೆದು, ಅಭಿವೃದ್ಧಿಪಡಿಸುತ್ತಿದ್ದಾರೆ. ಇದರ ಮುಂದುವರಿದ ಭಾಗವಾಗಿ ಎಲ್ಲ ಸಂಸದರು, ರಾಜ್ಯಸಭಾ ಸದಸ್ಯರು ಹಾಗೂ ವಿಧಾನ ಪರಿಷತ್ ಸದಸ್ಯರು ತಲಾ ಕನಿಷ್ಠ 3 ಸರ್ಕಾರಿ ಶಾಲೆಯನ್ನು ದತ್ತು ಪಡೆದು ಅಭಿವೃದ್ಧಿಪಡಿಸುವಂತೆ ಮುಖ್ಯಮಂತ್ರಿಗಳು ಪತ್ರ ಬರೆದಿದ್ದಾರೆ ಎಂದು ಡಾ. ಎಂ.ಆರ್. ದೊರೆಸ್ವಾಮಿ ಮಾಹಿತಿ ನೀಡಿದ್ದಾರೆ.